ಕರ್ನಾಟಕ ಸರಕಾರ
ಜಿಲ್ಲಾ ಪಂಚಾಯತ್, ಗದಗ

# ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ

## ಕಾರ್ಯಕ್ರಮ ನಿರ್ವಹಣಾ ಘಟಕ, ಗದಗ

NATIONAL URBAN HEALTH MISSION

**ದೂರವಾಣಿ ಸಂ: 08372-233996, 231744,** ಇಮೇಲ್:dhogadag@gmail.com

ಕ್ರ.ಸಂ:ಜಿಆಕುಕಸೊಗ/ NHM/2025-26 ದಿನಾಂಕ: 15/05/2025

## ಪತ್ರಿಕಾ ಪ್ರಕಟಣೆ

2024-25 ನೇ ಸಾಲಿಗೆ PM-ABHIM ಯೋಜನೆಯಡಿಯಲ್ಲಿ ಖಾಲಿಯಿರುವ ವಿವಿಧ ಹುದ್ದೆಗಳನ್ನು ರೋಸ್ಟರ್ ಹಾಗೂ ಮೇರಿಟ್ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ದಿನಾಂಕ:31.03.2026 ರವರೆಗೆ ನೇರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಈ ಕೆಳಗೆ ವಿವರಿಸಿದಂತೆ ಕಿರಿಯ ಪ್ರಯೋಗಶಾಲಾ ತಂತ್ರಜ್ಞ ಅಧಿಕಾರಿಗಳು/ಕಿರಿಯ ದರ್ಜೆ ಸಹಾಯಕ ಮತ್ತು ಶುಶ್ರೂಷ ಅಧಿಕಾರಿ ಹುದ್ದೆಗಳಿಗೆ ಪತ್ರಿಕಾ ಪ್ರಕಟಣೆ ನೀಡಿ ಎನ್ಐಸಿ ವೆಬ್‌ಸೈಟ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ದಿನಾಂಕ:20.05.2025 ರಿಂದ 30.05.2025 ರ ಸಂಜೆ 5.00 ಘಂಟೆ ಒಳಗೆ ಎನ್ಐಸಿ ವೆಬ್‌ಸೈಟ್‌ಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಹುದ್ದೆಗೆ ಸಂಬಂಧಿಸಿದ ಎಲ್ಲ ದಾಖಲಾತಿಗಳನ್ನು ಪಿಡಿಎಫ್ ಮಾಡಿ ಕಡ್ಡಾಯವಾಗಿ ಅಪ್ಲೋಡ್ ಮಾಡುವುದು. ಹುದ್ದೆಗೆ ಸಂಬಂಧ ಪಟ್ಟಂತೆ ಅಪೂರ್ಣ ದಾಖಲಾತಿಗಳನ್ನು ಸಲ್ಲಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ಸದರಿ ಮೇಲ್ಕಾಣಿಸಿದ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದ ಪೂರ್ಣ ಪ್ರಮಾಣದ ಹಕ್ಕನ್ನು ಜಿಲ್ಲಾ ಆಯ್ಕೆ ಸಮಿತಿ ಕಾಯ್ದಿರಿಸಿಕೊಂಡಿರುತ್ತದೆ ಹಾಗೂ ವಯೋಮಿತಿಯನ್ನು ರಾಜ್ಯ ಮಟ್ಟದ ಮಾರ್ಗಸೂಚಿ ಪ್ರಕಾರ ನಿಗದಿಪಡಿಸಲಾಗುತ್ತದೆ. ನೇಮಕಾತಿ ಸಮಿತಿಯು ಅನುಮೋದನೆಗೊಂಡ ಹುದ್ದೆಗಳನ್ನು ಮಾರ್ಗಸೂಚಿ/ಆರ್‌ಓಪಿ ಪ್ರಕಾರ ಹೆಚ್ಚು ಅಥವಾ ಕಡಿಮೆ ಮಾಡುವ ಪ್ರಾಧಿಕಾರ ಹೊಂದಿರುತ್ತಾರೆ ಹಾಗೂ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಸದರಿ ನೇಮಕಾತಿ ಕುರಿತು ಹೆಚ್ಚಿನ ಮಾಹಿತಿಯನ್ನು ರಜಾ ದಿನಗಳನ್ನು ಹೊರತುಪಡಿಸಿ ಕಛೇರಿ ಸಮಯದಲ್ಲಿ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರ ಘಟಕ ಎನ್‌ಹೆಚ್‌ಎಮ್, ರೂಮ್ 101, ಗದಗ ಕಛೇರಿ ಅವಧಿಯಲ್ಲಿ ಪಡೆಯಬಹುದು ಹಾಗೂ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

| ಕ್ರ.ಸಂ | ಹುದ್ದೆ | ನಿಗದಿಪಡಿಸಿದ ವಿದ್ಯಾರ್ಹತೆ | ಹುದ್ದೆ ಸಂಖ್ಯೆ | ವಯೋಮಿತಿ |
|---|---|---|---|---|
| 1 | ಪ್ರಯೋಗ ಶಾಲಾ ತಂತ್ರಜ್ಞರು/ಕಿರಿಯ ದರ್ಜೆ ಸಹಾಯಕರು (Lab Tech Officer/ LDC) | 1) ಎ.ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಮತ್ತು ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗಶಾಲಾ ತಂತ್ರಜ್ಞತೆಯಲ್ಲಿ ಮೂರು ವರ್ಷದ ಡಿಪ್ಲೋಮಾ ಕೋರ್ಸನಲ್ಲಿ ಉತ್ತೀರ್ಣ ಹೊಂದಿರಬೇಕು.<br>**ಅಥವಾ**<br>2) ದ್ವಿತೀಯ ಪಿ.ಯು.ಸಿ ಯಲ್ಲಿ ವಿಜ್ಞಾನ ವಿಷಯದಲ್ಲಿ ಉತ್ತೀರ್ಣ ಮತ್ತು ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯು ನಡೆಸುವ 2 ವರ್ಷಗಳ ಪ್ರಯೋಗಶಾಲಾ ತಂತ್ರಜ್ಞರ ತರಬೇತಿ ಪಡೆದಿರಬೇಕು.<br>3) ಪ್ರಯೋಗಶಾಲಾ ತಂತ್ರಜ್ಞರು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಅರೆವೈದ್ಯಕೀಯ ಮಂಡಳಿಯಲ್ಲಿ ನೋಂದಣಿ ಆಗಿರಬೇಕು. | ಒಟ್ಟು- 11 ಹುದ್ದೆಗಳು | 45 ವರ್ಷ |
| 2 | ಶುಶ್ರೂಷ ಅಧಿಕಾರಿ (Nursing Officer) | 1) ಬಿ.ಎಸ್.ಸಿ ನರ್ಸಿಂಗ್ ಅಥವಾ ಪೋಸ್ಟ್ ಸರ್ಟಿಫೈಡ್ ಬಿ.ಎಸ್.ಸಿ ನರ್ಸಿಂಗ್ ಅಥವಾ ಡಿಪ್ಲೋಮಾ ಇನ್ ನರ್ಸಿಂಗ್.<br>2) ಕರ್ನಾಟಕ ರಾಜ್ಯ ನರ್ಸಿಂಗ್ ಮಂಡಳಿಯಲ್ಲಿ ನೋಂದಣಿ ಆಗಿರಬೇಕು. | ಒಟ್ಟು- 11 ಹುದ್ದೆಗಳು | 45 ವರ್ಷ |

ಸದಸ್ಯ ಕಾರ್ಯದರ್ಶಿಗಳು
ಆಯ್ಕೆ ಸಮಿತಿ ಜಿಲ್ಲಾ ಆರೋಗ್ಯ ಮತ್ತು
ಕುಟುಂಬ ಕಲ್ಯಾಣ ಸಂಘ, ಗದಗ.